ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆಯ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 19/3/2

# ಸೀಡಿ ಹಗರಣ ಚರ್ಚೆಗೆ ಇಂದು ಸಿದ್ದು ನಿಲುವಳಿ

## ಸದನದಲ್ಲಿ ಚರ್ಚೆಗೆ ಆಗ್ರಹಿಸಲು ಕಾಂಗ್ರೆಸ್ ನಿರ್ಧಾರ ಅಸಲಿಯೇ, ನಕಲಿಯೇ ಎಂದು ಚರ್ಚಿಸಲು ಕೋರಿಕೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 19/3/21

ರಾಜ್ಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿರುವ ಮಾಜಿ ಸಚಿವರ ರಾಸಲೀಲೆ ಸಿ.ಡಿ. ಪ್ರಕರಣದ ಬಗ್ಗೆಚರ್ಚಿಸಲುವಿಧಾನಸಭೆಯಲ್ಲಿ ನಿಲುವಳಿ ಸೂಚನೆ ಮಂಡಿಸಲು ಕಡೆಗೂ ಕಾಂಗ್ರೆಸ್ ನಿರ್ಧರಿಸಿದೆ.



ಶುಕ್ರವಾರ ಬೆಳಗ್ಗೆ ಕಲಾಪ ಆರಂಭಕ್ಕೂ ಒಂದು ಗಂಟೆ ಮೊದಲು ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ ಅವರು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರಿಗೆ ನಿಲುವಳಿ ಸೂಚನೆ ಮಂಡನೆಗೆ ಮನವಿ ಪತ್ರ ನೀಡಲಿದ್ದಾರೆ.

ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರದ್ದು ಎನ್ನಲಾದ ಸಿ.ಡಿ. ರಾಜ್ಯಾದ್ಯಂತ ಸುದ್ದಿ ಮಾಡುತ್ತಿದೆ. ಮಾಜಿ ಸಚಿವರು ಇದು ನಕಲಿ ವಿಡಿಯೋ ಎಂದು ಒಂದು ಸಲ ಹೇಳಿದರೆ, ಮತ್ತೊಂದು ಸಲ ಮರ್ಯಾದೆಗೆ ಅಂಜಿ ಬ್ಲ್ಯಾಕ್‌ಮೇಲ್ ಮಾಡಿದವರಿಗೆ ಹಣ ನೀಡಿದ್ದೆ ಎಂದು ಹೇಳಿದ್ದಾರೆ. ಹೀಗಾಗಿ ಮಾಜಿ ಸಚಿವರೊಬ್ಬರ ಮೇಲೆ ಆರೋಪ ಹೊರಿಸಿರುವ ಸಿ.ಡಿ. ನಕಲಿಯೇ ಅಥವಾ ಅಸಲಿಯೇ ಎಂಬ ಬಗ್ಗೆ ಚರ್ಚೆ ನಡೆಯಬೇಕು. ಸದನಕ್ಕೆ ಸಿ.ಡಿ. ಸತ್ಯಾಸತ್ಯತೆ ಬಗ್ಗೆ ಮಾಹಿತಿ ಒದಗಿಸಬೇಕು ಎಂದು ಒತ್ತಾಯಿಸಲಿದ್ದಾರೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ. ಇನ್ನು ಸಿ.ಡಿ.ಯಲ್ಲಿ ಮಾಜಿ ಸಚಿವರು ಕನ್ನಡಿಗರ ಬಗ್ಗೆ ಅವಹೇಳನಕಾರಿಯಾಗಿ ಹೇಳಿಕೆ ನೀಡಿದಂತೆ ಬಿಂಬಿಸಲಾಗಿದೆ.

➘ 7

# ಸೀಡಿ ಹಗರಣ ಚರ್ಚೆಗೆ ಇಂದು ಸಿದ್ದು ನಿಲುವಳಿ

➘ ಮೊದಲ ಪುಟದಿಂದ

ಕನ್ನಡಿಗರನ್ನು ಕೆಟ್ಟ ಭಾಷೆಯಲ್ಲಿ ಅವಹೇಳನ ಮಾಡಿದ್ದಾರೆ. ಹೀಗಾಗಿ ರಾಜ್ಯದ ಗೌರವದ ದೃಷ್ಟಿಯಿಂದ ಸಿ.ಡಿ.ಯು ಅಸಲಿಯೇ ಅಥವಾ ನಕಲಿಯೇ ಎಂಬುದು ಬಯಲಾಗಬೇಕು ಎಂದು ಪ್ರಾಥಮಿಕ ವಿಷಯ ಮಂಡನೆ ವೇಳೆ ಸ್ಪೀಕರ್ ಅವರಿಗೆ ಸಿದ್ದರಾಮಯ್ಯ ಮನವಿ ಸಲ್ಲಿಸಲಿದ್ದಾರೆ. ಬಳಿಕ ಚರ್ಚೆಗೆ ಅವಕಾಶ ನೀಡಬೇಕೇ ಅಥವಾ ಬೇಡವೇ ಎಂಬುದನ್ನು ಸ್ಪೀಕರ್ ನಿರ್ಧರಿಸಲಿದ್ದಾರೆ ಎನ್ನಲಾಗಿದೆ.